## 2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು.

**ಓ ಎಸ್ ನಂ.39-2023** **ಪಿ . ಡಬ್ಲ್ಯುಃ 1**

| | |
|---|---|
| ಸಾಕ್ಷಿದಾರರ ಹೆಸರು<br>ತಂದೆಯ/ಗಂಡನ ಹೆಸರು<br>ವಯಸ್ಸು<br>ಉದ್ಯೋಗ<br>ವಾಸ್ತವ್ಯ | ಅಪ್ಸರಿ<br>ಲೇ.ಇಮಾಮ್ ಸಾಬ್<br>43 ವರ್ಷ<br>ಗೃಹಿಣಿ<br>ಬನ್ನಿಮಂಟಪ, ಮೈಸೂರು |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 07-09-2023.** |

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಹೆಚ್.ಜಿ.ಎಸ್ ರವರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿದ್ದು ಅದನ್ನು ನಾನೇ ಹೇಳಿ ಬರೆಯಿಸಿ ಸಹಿ ಮಾಡಿರುತ್ತೇನೆ.

ದಿ.19-07-1971 ರ ನೋಂದಣಿ ಶುದ್ಧ ಭೋಗ್ಯ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ದಿ.21-12-2022 ರಂದು ಪ್ರತಿವಾದಿ ರವರಿಗೆ ನನ್ನ ವಕೀಲರ ಮುಖೇನ ಕಳುಹಿಸಿದ ನೋಟಿಸ್ ನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಅಂಚೆ ರಶೀದಿಗನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು.

(ಪ್ರತಿವಾದಿಗಳು ವಾದ ಪತ್ರಕ್ಕೆ ತಮ್ಮ ಲಿಖಿತ ತಕರಾರು ಸಲ್ಲಿಸದೇ ಇರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು)

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/-**

**2 ನೇ ಪ್ರ.ದ. ನ್ಯಾ ದಂ. ನಂಜನಗೂಡು**